## ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
## KARNATAKA LEGISLATIVE ASSEMBLY, RESEARCH AND REFERENCE BRANCH

### ಪತ್ರಿಕಾ ತುಣುಕುಗಳು
### PAPER CLIPPINGS

ಶಾಖೆ / ವಿಷಯ : DEPARTMENT / SUBJECT: ____________

ಪತ್ರಿಕೆಯ ಹೆಸರು : NAME OF THE NEWS PAPER: ____________ ದಿನಾಂಕ : DATE : 27/9/2020

# ಬಿಜೆಪಿ ಮುಖಂಡ ಜಸ್ವಂತ್ ಸಿಂಗ್ ನಿಧನ

**ನವದೆಹಲಿ:** ಮಾಜಿ ಕೇಂದ್ರ ಸಚಿವ, ಬಿಜೆಪಿಯ ಸ್ಥಾಪಕ ಸದಸ್ಯರಲ್ಲಿ ಒಬ್ಬರು ಹಾಗೂ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ಆತ್ಮೀಯರಾಗಿದ್ದ ಜಸ್ವಂತ್ ಸಿಂಗ್ ಬಹುಕಾಲದ ಅನಾರೋಗ್ಯದಿಂದಾಗಿ ಮೃತಪಟ್ಟಿದ್ದಾರೆ. ಅವರಿಗೆ 82 ವರ್ಷ ವಯಸ್ಸಾಗಿತ್ತು.



ಭಾನುವಾರ ಬೆಳಗ್ಗೆ 6.55ರ ಹೊತ್ತಿಗೆ ಬಹು ಅಂಗಾಂಗ ವೈಫಲ್ಯದಿಂದ ಅವರು ನಿಧನರಾಗಿದ್ದಾರೆ ಎಂದು ಆಸ್ಪತ್ರೆ ಹೇಳಿಕೆಯನ್ನು ಬಿಡುಗಡೆ ಮಾಡಿದೆ.

ಮಾಜಿ ಸೇನಾಧಿಕಾರಿಯಾಗಿದ್ದ ಜಸ್ವಂತ್ ಸಿಂಗ್ 2014ರಲ್ಲಿ ತಮ್ಮ ಮನೆಯಲ್ಲಿ ಜಾರಿ ಬಿದ್ದು, ತಲೆಗೆ ಪೆಟ್ಟಾಗಿದ್ದರಿಂದ ಆರ್ಮಿ ರಿಸರ್ಚ್ ಅಂಡ್ ರೆಫರಲ್ ಆಸ್ಪತ್ರೆಗೆ ದಾಖಲಾಗಿದ್ದರು. ದೀರ್ಘಕಾಲ ಕೋಮಾದಲ್ಲಿದ್ದು ನಂತರ ಚೇತರಿಸಿಕೊಂಡಿದ್ದ ಅವರು, ಆಗಿಂದಾಗ್ಗೆ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದರು. ಜೂನ್ ತಿಂಗಳಲ್ಲಿ ಮತ್ತೆ ಅವರನ್ನು ಆಸ್ಪತ್ರೆಗ ದಾಖಲಿಸಲಾಗಿತ್ತು.

ರಾಜಸ್ಥಾನದ ಜೋಧಪುರಲ್ಲಿನ ಅವರ ತೋಟದ ಮನೆಯಲ್ಲಿ ಅಂತ್ಯ ಸಂಸ್ಕಾರ ನಡೆಯಿತು.